# ಕರ್ನಾಟಕ ವಿಧಾನ ಪರಿಷತ್ತು

1. ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 1135
2. ಮಾನ್ಯ ವಿಧಾನ ಪರಿಷತ್ತಿನ ಸದಸ್ಯರ ಹೆಸರು : ಶ್ರೀಮತಿ ಹೇಮಲತಾ ನಾಯಕ್ (ವಿಧಾನ ಸಭೆಯಿಂದ ಚುನಾಯಿತರಾದವರು)
3. ಉತ್ತರಿಸುವ ದಿನಾಂಕ : 21.08.2025
4. ಉತ್ತರಿಸುವ ಸಚಿವರು : ಗೃಹ ಸಚಿವರು.

| ಕ್ರಮ ಸಂ. | ಪ್ರಶ್ನೆ | ಉತ್ತರ |
|---|---|---|
| (ಅ) | ಯುವಜನತೆಗೆ ಮದ್ಯ ವ್ಯಸನ ತಡೆಗಟ್ಟಲು ಕೊಪ್ಪಳ ಜಿಲ್ಲೆಯಲ್ಲಿ ಸರ್ಕಾರ ಅಥವಾ ಪೊಲೀಸ್‌ರು ಯಾವ ಜಾಗೃತಿ ಕಾರ್ಯ ಕ್ರಮಗಳನ್ನು ನಡೆಸುತ್ತಿದ್ದಾರೆ; ಶಾಲಾ-ಕಾಲೇಜುಗಳಲ್ಲಿ ಯಾವ ಶೈಕ್ಷಣಿಕ ಅಭಿಯಾನಗಳು ನಡೆದಿವೆ; (ವಿವರ ನೀಡುವುದು) | ಕೊಪ್ಪಳ ಜಿಲ್ಲೆಯ ನಗರ ಮತ್ತು ಗ್ರಾಮೀಣ ಪ್ರದೇಶಗಳ ಶಾಲಾ-ಕಾಲೇಜುಗಳಿಗೆ ಭೇಟಿ ನೀಡಿ ಸ್ಲೋಗನ್ ಮತ್ತು ಬಿತ್ತಿ ಪತ್ರಗಳ ಮೂಲಕ ಜಾಗೃತಿ ಕಾರ್ಯಕ್ರಮಗಳನ್ನು ಹಮ್ಮಿಕೊಂಡು ಗ್ರಾಮಗಳ ಜನರಿಗೆ ಮದ್ಯ ವ್ಯಸನ ಮಾಡದಂತೆ ಜಾಗೃತಿ ಮೂಡಿಸಲಾಗುತ್ತಿದೆ.<br><br>ಕೊಪ್ಪಳ ಜಿಲ್ಲೆ ಸೇರಿದಂತೆ ರಾಜ್ಯದಲ್ಲಿ ಯುವಜನತೆಯು ಮದ್ಯ ವ್ಯಸನದಿಂದ ವಿಮುಕ್ತಿಗೊಳಿಸಲು ಪೊಲೀಸ್ ಇಲಾಖೆಯ ವತಿಯಿಂದ "**ಮಾದಕ ವಸ್ತು ವಿರೋಧಿ ದಿನಾಚರಣೆಯ**" ಅಂಗವಾಗಿ ಶಾಲಾ-ಕಾಲೇಜುಗಳಿಗೆ ಭೇಟಿ ನೀಡಿ ವಿದ್ಯಾರ್ಥಿಗಳಿಗೆ ಮಾದಕ ವಸ್ತುಗಳಿಂದಾಗುವ ಅನಾಹುತಗಳ ಕುರಿತು ತಿಳುವಳಿಕೆ ನೀಡಿ, ಈ ಸಂಬಂಧ ಸಾರ್ವಜನಿಕರಿಗೆ ಅರಿವು ಮೂಡಿಸಲು ಬೀದಿ ನಾಟಕ, ಆಶುಭಾಷಣ ಮತ್ತು ಪ್ರಬಂಧ ಸ್ಪರ್ಧೆಗಳ ಕಾರ್ಯಕ್ರಮಗಳನ್ನು ಸರ್ಕಾರದ ಇತರೆ ಇಲಾಖೆಗಳ ಸಹಯೋಗದೊಂದಿಗೆ ಆಯೋಜಿಸಲಾಗಿರುತ್ತದೆ.<br><br>ಕರ್ನಾಟಕ ಸರ್ಕಾರವು ರಾಜ್ಯದಲ್ಲಿ "ನಶಾ ಮುಕ್ತ ಭಾರತ" ಅಭಿಯಾನದಡಿಯಲ್ಲಿ ಮಾದಕ ದ್ರವ್ಯ ಸೇವನೆಯಿಂದ ಉಂಟಾಗುವ ದುಷ್ಪರಿಣಾಮಗಳ ಕುರಿತು ರಾಜ್ಯ ಮತ್ತು ಜಿಲ್ಲಾ ಸಮಿತಿಗಳು ಕಾರ್ಯಕ್ರಮಗಳಲ್ಲಿ ಯುವಜನತೆ ಮತ್ತು ಸಾರ್ವಜನಿಕರಿಗೆ ಕಾನೂನು ಅರಿವು ಮತ್ತು ಜಾಗೃತಿ ಕಾರ್ಯಕ್ರಮಗಳನ್ನು ಮಾಡಲಾಗುತ್ತಿದೆ.<br><br>**ಕೊಪ್ಪಳ ಜಿಲ್ಲೆಯಲ್ಲಿ ಹಮ್ಮಿಕೊಂಡ ಕಾರ್ಯಕ್ರಮಗಳ ವಿವರ:-** |

| ಕ್ರ. ಸಂ. | ವರ್ಷ | ಜಾಗೃತಿ ಕಾರ್ಯಕ್ರಮಗಳ ಸಂಖ್ಯೆ | ಭಾಗವಹಿಸಿದ ಸಾರ್ವಜನಿಕರು/ ವಿದ್ಯಾರ್ಥಿಗಳ ಸಂಖ್ಯೆ |
|---|---|---|---|
| 1. | 2024 | 122 | 7897 |
| 2. | 2025 (ಜುಲೈ) | 118 | 5548 |

(ಆ) ಗಂಗಾವತಿಯಲ್ಲಿ ಕಳೆದ ವರ್ಷ ಮಾತ್ರವೇ ನಾಲ್ಕಕ್ಕಿಂತ ಹೆಚ್ಚು ಡ್ರಗ್ಸ್ ಪ್ರಕರಣಗಳು ವರದಿಯಾಗಿವೆ; ಇದನ್ನು ತಡೆಯುವ ದೃಷ್ಟಿಯಿಂದ ಹೆಚ್ಚುವರಿ ಅಥವಾ ವಿಶೇಷ ಪೊಲೀಸ್ ತಂಡ/ಸಿಬ್ಬಂದಿ ನಿಯೋಜನೆ ಮಾಡಲಾಗಿದೆಯೇ; (ವಿವರ ಒದಗಿಸುವುದು)

ಗಂಗಾವತಿ ನಗರದಲ್ಲಿ ಮಾದಕ ವಸ್ತುಗಳ ನಿಯಂತ್ರಣ, ಉಪಯೋಗಿಸುವವರ ಮತ್ತು ಮಾರಾಟಗಾರರ ಪತ್ತೆ ಮಾಡುವ ಕುರಿತು ಡಿ.ಎಸ್.ಪಿ ಮತ್ತು ಪಿ.ಐ. ರವರ ನೇತೃತ್ವದಲ್ಲಿ ತಂಡ ರಚಿಸಲಾಗಿದೆ. ಡ್ರಗ್ಸ್ ದಂಧೆಯಲ್ಲಿ ತೊಡಗಿರುವವರ ಬಗ್ಗೆ ಮಾಹಿತಿ ಸಿಕ್ಕಲ್ಲಿ ಕೂಡಲೇ ದಾಳಿ ಮಾಡಿ ಪ್ರಕರಣಗಳನ್ನು ದಾಖಲಿಸಲಾಗುತ್ತಿದೆ.

**2024 ನೇ ಸಾಲಿನಲ್ಲಿ ಗಂಗಾವತಿಯಲ್ಲಿ ದಾಖಲಾಗಿರುವ NDPS ಪ್ರಕರಣಗಳ ವಿವರ:-**

| ಕ್ರ. ಸಂ. | ಪೊಲೀಸ್ ಠಾಣೆಯ ಹೆಸರು | ಮೊಕದ್ದಮೆ ಸಂಖ್ಯೆ | ದೋಷಾರೋಪಣ ಪತ್ರ ಸಲ್ಲಿಸಿದ ದಿನಾಂಕ | ಪ್ರಸ್ತುತ ಹಂತ |
|---|---|---|---|---|
| 1. | Gangavathi Town PS1 | 0169/2024 | 07.02.2025 | CC No. 2013 /2025 |
| 2. | | 0190/2024 | 30.12.2024 | CC No. 205 /2025 |
| 3. | | 0192/2024 | 30.12.2024 | CC No. 204 /2025 |
| 4. | | 0194/2024 | 31.12.2024 | CC No. 190 /2024 |
| 5. | | 0195/2024 | 31.12.2024 | CC No. 175 /2025 |
| 6. | | 0218/2024 | 31.12.2024 | CC No. 2025 /2025 |
| 7. | | 0221/2024 | 31.12.2024 | CC No. 2023 /2025 |

**ಡ್ರಗ್ಸ್ ಪ್ರಕರಣಗಳನ್ನು ತಡೆಯುವ ದೃಷ್ಟಿಯಿಂದ ಸರ್ಕಾರವು ಕೈಗೊಂಡ ಕ್ರಮಗಳು ಈ ಕೆಳಕಂಡಂತಿದೆ:-**

ರಾಜ್ಯದಲ್ಲಿ ಮಾದಕ ವಸ್ತುಗಳ ನಿಯಂತ್ರಣ ಕುರಿತಂತೆ ಸರ್ಕಾರದ ಆದೇಶ ಸಂಖ್ಯೆ: ಹೆಚ್‌ಡಿ/ 141/ ಪಿಒಪಿ/ 2025, ದಿನಾಂಕ: 02.08.2025 ರಲ್ಲಿ ಕಾನೂನು ಮತ್ತು ಸುವ್ಯವಸ್ಥೆ ಪೊಲೀಸ್ ಠಾಣೆಗಳಲ್ಲಿ ನಾರ್ಕೋಟಿಕ್ಸ್ ಸಂಬಂಧ ದಾಖಲಾಗುವ ಪ್ರಕರಣಗಳ ಮೇಲ್ವಿಚಾರಣೆಗಾಗಿ ಮಾದಕ ವಸ್ತುಗಳ ವಿರೋಧಿ ಕಾರ್ಯಪಡೆ (Anti Narcotics Task Force) ಘಟಕವನ್ನು ಸೃಜಿಸಲಾಗಿದೆ.

- 2023 ನೇ ಸಾಲಿನಲ್ಲಿ 62 ಪ್ರಕರಣಗಳನ್ನು ದಾಖಲಿಸಿ, 119 ಆರೋಪಿಗಳನ್ನು ದಸ್ತಗಿರಿ ಮಾಡಿ ಅವರಿಂದ ರೂ.68,44,660/-ಮೌಲ್ಯದ 228 ಕೆಜಿ ಗಾಂಜಾ ಮತ್ತು 357ಗ್ರಾಂ ಸಿಂಥೆಟಿಕ್ ಡ್ರಗ್ ವಶಪಡಿಸಿಕೊಳ್ಳಲಾಗಿದೆ.
- 2024 ನೇ ಸಾಲಿನಲ್ಲಿ 43 ಪ್ರಕರಣಗಳನ್ನು ದಾಖಲಿಸಿ 81 ಆರೋಪಿಗಳನ್ನು ದಸ್ತಗಿರಿ ಮಾಡಿ ಅವರಿಂದ ರೂ.1,02,45,050/- ಮೌಲ್ಯದ 379.3 ಕೆಜಿ ಗಾಂಜಾ ಮತ್ತು 143 ಗ್ರಾಂ ಸಿಂಥೆಟಿಕ್ ಡ್ರಗ್ ವಶಪಡಿಸಿಕೊಳ್ಳಲಾಗಿದೆ.
- 2025ನೇ ಸಾಲಿನಲ್ಲಿ ಇಲ್ಲಿಯವರೆಗೆ 289 ಪ್ರಕರಣಗಳನ್ನು ದಾಖಲಿಸಿ, 324 ಆರೋಪಿಗಳನ್ನು ದಸ್ತಗಿರಿ ಮಾಡಿ ಅವರಿಂದ ರೂ.26,68,850/-ಮೌಲ್ಯದ 98 ಕೆಜಿ ಗಾಂಜಾ ಮತ್ತು 153ಗ್ರಾಂ ಸಿಂಥೆಟಿಕ್ ಡ್ರಗ್ ವಶಪಡಿಸಿಕೊಳ್ಳಲಾಗಿದೆ.

- ಕರ್ನಾಟಕ ರಾಜ್ಯದಲ್ಲಿ ಮಾದಕ ವಸ್ತುಗಳ ಬಳಕೆ, ಸಾಗಣೆ, ಸಂಗ್ರಹಣೆ ನಿಯಂತ್ರಿಸುವ ಸಲುವಾಗಿ ರಾಜ್ಯ ಸರ್ಕಾರವು ಮಾದಕ ದ್ರುವ್ಯ ಮುಕ್ತ ರಾಜ್ಯವನ್ನಾಗಿ (Drug Free Karnataka) ಮಾಡಲು ನಾನಾ ರೀತಿಯ ಕಾರ್ಯತಂತ್ರದ ವಿಧಾನಗಳನ್ನು ಅನುಸರಿಸಲಾಗುತ್ತಿದೆ. ರೂಢಿಗತ ಆರೋಪಿಗಳ ವಿರುದ್ಧ PITNDPS-1988 ಕಾಯ್ದೆರನ್ವಯ ಕ್ರಮ ಕೈಗೊಳ್ಳಲಾಗುತ್ತಿದೆ.
- ರಾಜ್ಯದಲ್ಲಿ ಮಾದಕ ದ್ರುವ್ಯ ಮುಕ್ತ ರಾಜ್ಯವನ್ನಾಗಿ ಮಾಡುವ ನಿಟ್ಟಿನಲ್ಲಿ ಇದುವರೆವಿಗೂ NDPS-1985 ಕಾಯ್ದೆಯಡಿಯಲ್ಲಿ ಒಟ್ಟು 20,891 ಪ್ರಕರಣ ಗಳನ್ನು ದಾಖಲಿಸಿ 17,230 ಆರೋಪಿಗಳನ್ನು ಬಂಧಿಸಿ ಯಶಸ್ವಿ ಕಾರ್ಯಾಚರಣೆ ನಡೆಸಲಾಗಿದೆ.
- ಪ್ರತಿ ವರ್ಷವು ಸುಮಾರು 10 ಟನ್ ಗಾಂಜಾ ವಸ್ತುಗಳನ್ನು ಮತ್ತು 230 ಸಿಂಥೆಟಿಕ್ ಡ್ರಗ್‌ಗಳನ್ನು (Synthetic Drugs) ವಶಪಡಿಸಿಕೊಂಡು ನಾಶಪಡಿಸಲಾಗುತ್ತಿದೆ.
- ಪ್ರತಿ ವರ್ಷವು 125 ಕೋಟಿ ಮೌಲ್ಯದ ಮಾದಕ ವಸ್ತುಗಳನ್ನು ವಶಪಡಿಸಿಕೊಂಡು ನಾಶ ಪಡಿಸಲಾಗುತ್ತಿದೆ. ಈ ವರ್ಷ 60 ಕೋಟಿ ಬೆಲೆ ಬಾಳುವ ಮಾದಕ ವಸ್ತುಗಳನ್ನು ಈಗಾಗಲೇ ವಶಪಡಿಸಿಕೊಳ್ಳಲಾಗಿದೆ.
- ಪ್ರತಿ ವರ್ಷವು ಸುಮಾರು 7000 ಭಾರತೀಯರು ಮತ್ತು 150 ವಿದೇಶಿಯರನ್ನು NDPS ಕಾಯ್ದೆ ಯಡಿಯಲ್ಲಿ ಬಂಧಿಸಿ ತನಿಖೆ ಕೈಗೊಂಡು ಪ್ರಕರಣದ ವಿಲೇವಾರಿಗೆ ಶ್ರಮಿಸಲಾಗುತ್ತಿದೆ.
- ಮಾದಕ ದ್ರುವ್ಯ ಸೇವನೆ, ಮಾರಾಟ, ಸಂಗ್ರಹಣೆ ಮತ್ತು ಸರಬರಾಜು ಮಾಡುವವರ ವಿರುದ್ಧ ಕ್ರಮ ಕೈಗೊಳ್ಳುವ ಸಲುವಾಗಿ ಸಿಐಡಿ ಘಟಕದಲ್ಲಿ ವಿಶೇಷ ತರಬೇತಿ ನೀಡುವ ಸೌಲಭ್ಯವನ್ನು ಕಲ್ಪಿಸಲಾಗಿದೆ. ಈಗಾಗಲೇ ರಾಜ್ಯದಲ್ಲಿ 167 ಅಧಿಕಾರಿ/ ಸಿಬ್ಬಂದಿಗಳಿಗೆ ತರಬೇತಿಯನ್ನು ನೀಡಲಾಗಿದೆ.
- ಮಾದಕ ವಸ್ತು ಸೇವನೆಯಿಂದ ಆಗುವ ದುಷ್ಪರಿಣಾಮಗಳ ಕುರಿತು ವಿಶೇಷ ಕಾರ್ಯ ಗಾರಗಳನ್ನು ರೂಪಿಸಿ ಈ ಕೆಳಕಂಡಂತೆ ಶಾಲಾ-ಕಾಲೇಜುಗಳ ವಿದ್ಯಾರ್ಥಿಗಳಿಗೆ ಜಾಗೃತಿ ಮೂಡಿಸುವ ಕಾರ್ಯಕ್ರಮ ಮಾಡಿ ತಿಳುವಳಿಗೆ ನೀಡಲಾಗಿದೆ:

| ವರ್ಷ | ಶಾಲಾ-ಕಾಲೇಜುಗಳ ಸಂಖ್ಯೆ | ವಿದ್ಯಾರ್ಥಿಗಳ ಸಂಖ್ಯೆ |
|---|---|---|
| 2023 | 2049 | 3,95,253 |
| 2024 | 3602 | 5,50,000 |
| 2025 | 4000 | 6,00,000 |

- ಮಾದಕ ಬೆಳೆಗಳ ಗುರುತಿಸುವಿಕೆ ಮತ್ತು ನಾಶ, ಅಕ್ರಮ ಮಾದಕ ವ್ಯಸನವನ್ನು ಪತ್ತೆ ಹಚ್ಚಲು ಮತ್ತು ನಿರ್ಮೂಲನೆ ಮಾಡಲು ರಾಜ್ಯಾದ್ಯಂತ ಪೊಲೀಸ್

| | | |
|---|---|---|
| | | ಸಿಬ್ಬಂದಿಗೆ NCB (ನಾರ್ಕೋಟಿಕ್ಸ್ ಕಂಟ್ರೋಲ್ ಬ್ಯೂರೋ) ಆನ್‌ಲೈನ್ ಕಾರ್ಯಗಾರಗಳ ಮೂಲಕ ತರಬೇತಿ ನೀಡಲಾಗುತ್ತಿದೆ. ಈ ಉದ್ದೇಶಕ್ಕಾಗಿ NCB ಮೊಬೈಲ್ ಅಪ್ಲಿಕೇಶನ್/ವೆಬ್ ಪೋರ್ಟಲ್ MAPDRUGS ಅನ್ನು ಸಹ ಪರಿಚಯಿಸಲಾಗಿದೆ.<br>➢ ಬೆಂಗಳೂರು ಪೊಲೀಸರು ಅಕ್ರಮ ಮಾದಕ ದ್ರವ್ಯ ಚಟುವಟಿಕೆಗಳಲ್ಲಿ ತೊಡಗಿರುವ ವಿದೇಶಿಗರು ವಾಸಿಸುವ ಪ್ರದೇಶಗಳ ಮೇಲೆ ಸೂಕ್ತ ನಿಗಾ ವಹಿಸಿ ಅಕ್ರಮ ಚಟುವಟಿಕೆ ಮೇಲೆ ನಿಯಂತ್ರಣ ಸಾಧಿಸಲಾಗಿದೆ.<br>➢ ಮನೆ ಮನೆ ಪೊಲೀಸ್ ಪರಿಕಲ್ಪನೆ ಅಡಿಯಲ್ಲಿ ಸಾರ್ವಜನಿಕರ ಸಹ ಭಾಗಿತ್ವದೊಂದಿಗೆ ಮಾಹಿತಿ ಯನ್ನು ಕಲೆ ಹಾಗಿ ಡ್ರಗ್ಸ್ ಹಾವಳಿಯ ವಿರುದ್ಧ ಕ್ರಮಕೈಗೊಳ್ಳಲಾಗುತ್ತಿದೆ. ವಿಶೇಷ ಡ್ರೈವ್ ಗಳನ್ನು ಹಮ್ಮಿಕೊಂಡು ಮಾದಕ ವಸ್ತು ಸೇವನೆ ಮಾಡುವವರ ವಿರುದ್ಧ ಪ್ರಕರಣ ದಾಖಲು ಮಾಡಿ ಕ್ರಮಕೈಗೊಳ್ಳಲಾಗುತ್ತಿದೆ. |
| ಇ) | ಡ್ರಗ್ಸ್ ವ್ಯವಹಾರಕ್ಕೆ ಸಹಕಾರ ನೀಡಿದ ಅಥವಾ ನಿರ್ಲಕ್ಷ ವಹಿಸಿದ ಅಧಿಕಾರಿಗಳ ವಿರುದ್ಧ ಶಿಸ್ತು ಕ್ರಮ ಕೈಗೊಳ್ಳಲಾಗಿದೆ? (ವಿವರ ಒದಗಿಸುವುದು) | ಕೊಪ್ಪಳ ಜಿಲ್ಲೆಯಲ್ಲಿ ಡ್ರಗ್ಸ್ ವ್ಯವಹಾರಕ್ಕೆ ಸಹಕಾರ ನೀಡಿರುವ ಅಥವಾ ನಿರ್ಲಕ್ಷ ವಹಿಸಿರುವ ಬಗ್ಗೆ ಯಾವುದೇ ಅಧಿಕಾರಿಗಳ ವಿರುದ್ಧ ಪ್ರಕರಣ ದಾಖಲಾಗಿರುವುದಿಲ್ಲ. |

ಒಇ 50 ಪಿಎನ್‌ಡಿ 2025 (ಇ)

(ಡಾ: ಜಿ . ಪರಮೇಶ್ವರ)
ಗೃಹ ಸಚಿವರು